**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್. ಎಫ್. ಸಿ ನ್ಯಾಯಾಧೀಶರ ನ್ಯಾಯಾಲಯ ಯಾದಗಿರಿ.**

**ಸಿಸಿ ನಂ. 191-2018**

| | | |
|---|---|---|
| ಸಾಕ್ಷಿಯ ಹೆಸರುಃ | ಯಲ್ಲಪ್ಪ | ಪ್ರಾಸಾಃ 3 |
| ತಂದೆ/ಗಂಡನ ಹೆಸರುಃ | ಮಲ್ಲಣ್ಣ | ಚಾಸಾಃ 2 |
| ವಯಸ್ಸು ಃ | 50 ವರ್ಷ | ದಿಃ 02-08-2023 |
| ಉದ್ಯೋಗಃ | ಒಕ್ಕಲುತನ | ಸಾಕ್ಷಿದಾರರಿಗೆ ಪ್ರಮಾಣ ವಚನ ಭೋದಿಸಲಾಯಿತು. |
| ವಾಸ ಸ್ಥಳಃ | ವಂಕಸಂಬ್ರ | |

**ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ನನಗೆ ಚಾಸಾಃ 3 ರವರ ಪರಿಚಯವಿದೆ. ನನಗೆ ಆರೋಪಿತನ ಪರಿಚಯವಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆಯನ್ನು ನುಡಿದಿರುವುದಿಲ್ಲ. ಯಾವ ದಿನದಂದು ಏನು ಆಗಿದೆ ಎಂದು ಗೊತ್ತಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನಮ್ನು ತೋರಿಸಲಾಗಿ ಅದು ಗುನ್ನಾ ಸ್ಥಳದ ಪಂಚನಾಮೆಯಾಗಿದ್ದು ಅದನ್ನು ಸಾಕ್ಷಿಯು ನೋಡಿ ಗುರುತಿಸಿರುವುದರಿಂದ ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಯಿತು. ಸಾಕ್ಷಿಯ ತನ್ನ ಹೆಬ್ಬೆಟ್ಟಿನ ಗುರುತನ್ನು ಗುರುತಿಸಿರುತ್ತಾನೆ. ನಿಪಿ-3 ರಲ್ಲಿ ರುವ ಫೋಟೊವನ್ನು ನೋಡಿ ಗುರುತಿಸಿರುತ್ತಾರನೆ ನಿಪಿ-2 ರಲ್ಲಿ ಏನು ಬರೆದಿರುತ್ತಾರೆ ಎಂಬುದರ ಬಗ್ಗೆ ಮಾಹಿತಿ ನನಗೆ ಇಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸರಕಾರಿ ಸಹಾಯಕ ಅಭಿಯೋಜಕರವರು ಪಾಟಿ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು ನ್ಯಾಯಾಲಯದ ಮುಂದೆ ಇರುವ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)**

ದಿನಾಂಕಃ 12-12-2017 ರಂದು ನನಗೆ ಮತ್ತು ಚಾಸಾಃ 3 ರವರನ್ನು ಪೋಲಿಸರು ಗುನ್ನಾ ಸ್ಥಳದ ಪಂಚನಾಮೆಯ ಪಂಚರಾಗಿ ಕರೆಸಿರುತ್ತಾರೆ ಎಂದರೆ ಸರಿಯಲ್ಲ. ನಮ್ಮ

ಸಮಕ್ಷಮದಲ್ಲಿ ನಿಪಿ-2 ರಲ್ಲಿ ಜರಿಗಿಸುತ್ತಾರೆ  ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟಿ ಸವಾಲುಃ  ಆರೋಪಿ ಪರ ವಕೀಲರು ಶ್ರೀ.ಎನ್ ಎಮ್ ಜಿ.  ಇವರಿಂದ ಇಲ್ಲ**

**ಮರು ವಿಚಾರಣೆಃ  ಇಲ್ಲ**

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ**
**ನ್ಯಾಯಾಧೀಶರು ಯಾದಗಿರಿ**